ವಿಷಯ : ಹುಬ್ಬಳ್ಳಿ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ (ಕಿಮ್ಸ್) ಹಣ ಮಂಜೂರಾತಿ.

1325 (1745)-ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ "ಕಿಮ್ಸ್" ಗೆ 2.25 ಕೋಟಿ ರೂಪಾಯಿಗಳನ್ನು ಮಂಜೂರು ಮಾಡಲಾಗಿದೆ ಎಂದು ಮಾನ್ಯ ಸಚಿವರು ಪತ್ರಿಕೆಗಳಿಗೆ ಹೇಳಿಕೆ ನೀಡಿರುವುದು ನಿಜವೆ. ನಿಜವಾದಲ್ಲಿ ಸದರಿ ಹಣವನ್ನು ಯಾವ ಸಾಲಿಗಾಗಿ ಮತ್ತು ಯಾವ ಉದ್ದೇಶದ ಸಲುವಾಗಿ ಮಂಜೂರು ಮಾಡಲಾಗಿದೆ?

ಆ) ಸದರಿ 2.25 ಕೋಟಿ ರೂಪಾಯಿಗಳನ್ನು ಈಗಾಗಲೇ ಪೂರ್ಣ ಬಿಡುಗಡೆ ಮಾಡಲಾಗಿದೆಯೇ? ಬಾಕಿ ಇದ್ದಲ್ಲಿ ಪೂರ್ಣ ಹಣ ಯಾವಾಗ ಬಿಡುಗಡೆ ಮಾಡಲಾಗುವುದು?

ಡಾ. ಎಂ. ಶಂಕರ್ ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು ಹುಬ್ಬಳ್ಳಿಗರು ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ರೂ. 1.20 ಕೋಟಿಗಳು ಮತ್ತು ಬಳ್ಳಾರಿಯ ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ 1.25 ಕೋಟಿ ರೂ.ಗಳು. ಒಟ್ಟು ರೂ. 2.45 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಹಣವನ್ನು ವೇತನ ಕಛೇರಿ ವೆಚ್ಚ, ಸಾಧನಸಲಕರಣೆಗಳು, ಪೀಠೋಪಕರಣ ಮುಂತಾದವುಗಳ ಖರೀದಿಗೆ ಮಂಜೂರು ಮಾಡಿ. 1996-97ನೇ ಸಾಲಿಗೆ ಬಿಡುಗಡೆ ಮಾಡಿದೆ.

ಆ) ಪ್ರಶ್ನೆ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ವಿಷಯ : ಬಸವ ಕಲ್ಯಾಣ ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವುದು.

1328 (1814)-ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಬಸವ ಕಲ್ಯಾಣ ತಾಲ್ಲೂಕಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವುದು

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಸವಕಲ್ಯಾಣ ತಾಲ್ಲೂಕಿನ ಮೋರ್‌ಖಂಡಿ ಹಾಗೂ ಖೇರಡಾ (ಬಿ) ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ?